8.	ಭಗವಾನ್ ಆಯುರ್ವೇದ ಮೆಡಿಕಲ್ ಕಾಲೇಜು, ಗಜೇಂದ್ರಗಡ, ರೋಣ ತಾ: ಧಾರವಾಡ ಜಿಲ್ಲೆ	1992-93
9.	ಡಾ:ಪಿ.ಎಸ್.ಎಂ.ರೂರಲ್ ಆಯುರ್ವೇದ ಮೆಡಿಕಲ್ ಕಾಲೇಜು, ಬಿಜಾಪುರ.	1992-93
10.	ಶ್ರೀ ಕಾಳಿದಾಸ ಆಯುರ್ವೇದ ಕಾಲೇಜು, ಬಾದಾಮಿ, ಬಿಜಾಪುರ ಜಿಲ್ಲೆ.	1992-93
11.	ಶ್ರೀ ಗುರುಶಿಕ್ಷಣ ಸಂಸ್ಥೆ, ಆಯುರ್ವೇದ ಮೆಡಿಕಲ್ ಕಾಲೇಜು, ಧಾರವಾಡ.	1992-93
12.	ಬಿಎಂಎಇಎನ್ ಆಯುರ್ವೇದ ಮೆಡಿಕಲ್ ಕಾಲೇಜು, ಕವಲಗುಂದಿ, ಭದ್ರಾವತಿ, ತಾ: ಶಿವಮೊಗ್ಗ.	1993-94
13.	ರಾಜೀವ್‌ಗಾಂಧಿ ಎಜುಕೇಷನ್ ಸೊಸೈಟಿ, ಆಯುರ್ವೇದ ಮೆಡಿಕಲ್ ಕಾಲೇಜು, ರೋಣ, ಧಾರವಾಡ ಜಿಲ್ಲೆ.	1993-94

ಹೋಮಿಯೋಪತಿ

1.	ಎಲ್‌ಇಎ ಹೋಮಿಯೋಪತಿ ಮೆಡಿಕಲ್ ಕಾಲೇಜು, ಧಾರವಾಡ.	1992-93
2.	ಅಲ್‌ಅಮೀನ್ ಹೋಮಿಯೋಪತಿ ಮೆಡಿಕಲ್ ಕಾಲೇಜು, ವಿಜಾಪುರ.	1992-93
3.	ಎನ್‌ಟಿಸಿಇ ಸೊಸೈಟಿ ನ್ಯಾಷನಲ್ ಹೋಮಿಯೋಪತಿ ಮೆಡಿಕಲ್ ಕಾಲೇಜು, ಧಾರವಾಡ.	1992-93
4.	ಎಸ್‌ಸಿ ಶಿರಕೋಳ ಹೋಮಿಯೋಪತಿ ಮೆಡಿಕಲ್ ಕಾಲೇಜು, ಸಂಕೇಶ್ವರ, ಬೆಳಗಾಂ ಜಿಲ್ಲೆ.	1993-94

ವಿಷಯ:- ಬಿಜಾಪುರ, ತಾಲ್ಲೂಕು, ಬಾದಾಮಿ ತಾಲ್ಲೂಕಿನಲ್ಲಿ ಖಾಲಿ ಇರತಕ್ಕ ವೈದ್ಯಾಧಿಕಾರಿಗಳ ಹುದ್ದೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 121 (484)

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ಬಾದಾಮಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1. ಬಿಜಾಪುರ ಜಿಲ್ಲೆಯ ಬಾದಾಮಿ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಪ್ರಾಥಮಿಕ

ಆರೋಗ್ಯ ಕೇಂದ್ರಗಳು ಹಾಗು ಆಸ್ಪತ್ರೆಗಳು ಇರುತ್ತವೆ?

2. ಸದರಿ ಆಸ್ಪತ್ರೆಗಳಲ್ಲಿ ಮಂಜೂರಾದ ವೈದ್ಯಾಧಿಕಾರಿಗಳ ಹಾಗೂ ವೈದ್ಯಕೀಯೇತರ ಹುದ್ದೆಗಳು ಎಷ್ಟು?

3. ಕೆಲವು ವರ್ಷಗಳಿಂದ ಈ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

4. ಆ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

1. ಎರಡು ಸಮುದಾಯ ಆರೋಗ್ಯ ಕೇಂದ್ರ ಹಾಗೂ ಒಂಬತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇರುತ್ತವೆ.

2. 16 ವೈದ್ಯಾಧಿಕಾರಿಗಳು ಮತ್ತು 39 ವೈದ್ಯಕೀಯೇತರ ಹುದ್ದೆಗಳು ಇರುತ್ತವೆ.

3. ವೈದ್ಯರ ಹುದ್ದೆ ಭರ್ತಿ ಮಾಡಿದೆ.

4. ಬಾದಾಮಿ ತಾಲ್ಲೂಕಿನಲ್ಲಿ ಎಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ವಿಷಯ:- ಬಾದಾಮಿ ತಾಲ್ಲೂಕಿನ ಹಲಕುರ್ಕಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 123 (485)

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ಬಾದಾಮಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ 1996-97ನೇ ಸಾಲಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಮಂಜೂರಾತಿಯನ್ನು ನೀಡಲು ಉದ್ದೇಶಿಸಿದ್ದಾರೆ.

ಆ) ಬಾದಾಮಿ ತಾಲ್ಲೂಕಿನ ಹಲಕುರ್ಕಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ ಮಾಡಲು ಸರ್ಕಾರದವರು ಕ್ರಮ ಕೈಗೊಂಡಿದ್ದಾರೆಯೇ?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಇನ್ನೂ ತೀರ್ಮಾನಿಸಿಲ್ಲ.

ಆ) ಸದ್ಯಕ್ಕೆ ಇಲ್ಲ.

ವಿಷಯ:- ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಸಂದರ್ಶಕರ ಸಮಿತಿ ರಚನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 124 (267)